**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 19/2022**

**ಚಾ.ಸಾ. :- 06**
**ಪ್ರಾ.ಸಾ. :- 03**

| | | |
|---|---|---|
| ಹೆಸರು | : | ಮಧು |
| ತಂದೆಯ ಹೆಸರು | : | ಲೇಟ್ ಹೊನ್ನೇಗೌಡ |
| ವಯಸ್ಸು | : | 39 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ದೊಡ್ಡಪಾಳ್ಯ ಗ್ರಾಮ. |

---

**ಪ್ರಮಾಣೀಕರಿಸಲಾದ ದಿನಾಂಕಃ- 22.12.2025.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗ ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ದಾಖಲೆಗೆ ಸಹಿ ಮಾಡುವಾಗ ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಪೊಲೀಸರು ಯಾವ ಕಾರಣಕ್ಕೆ ಸದರಿ ಮಹಜರ್ ಮಾಡಿರುತ್ತಾರೆಂದು ಗೊತ್ತಿಲ್ಲ.

*(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸ.ಸ.ಅ. ವಾದವನ್ನು ಆಲಿಸಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ*

*ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)*

**<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :</u>**

ದಿನಾಂಕಃ 27.10.2021 ರಂದು ಅಪಘಾತಕ್ಕೆ ಸಂಬಂಧಿಸಿದಂತೆ ಪೊಲೀಸರು ನನ್ನ ಸಮಕ್ಷಮ ಸದರಿ ಮಹಜರನ್ನು ಅಪಘಾತ ಸ್ಥಳವಾದ ಪಾಲಹಳ್ಳಿ ರೈಲ್ವೇ ಬ್ರಿಡ್ಜ್ ಬಳಿ ಬರೆದಿರುತ್ತಾರೆ ಎಂದರೆ ಸರಿಯಲ್ಲ.

ನಿಪಿ-4 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುತ್ತದೆ ಹಾಗೂ ಓದಿ ನೋಡಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**